**ಪಿ.ಡಬ್ಲ್ಯುಃ 1**

**ಸಾಕ್ಷಿಯನ್ನು ಕರೆಸಿ ಪ್ರಮಾಣೀಕರಿಸಲಾಯಿತು.**

**ದಿನಾಂಕಃ 28-03-2025**

ಈ ದಿನ ನಾನು ನ್ಯಾಯಾಲಯಕ್ಕೆ ನನ್ನ ಲಿಖಿತ ಸತ್ಯ ಪ್ರತಿಜ್ಞೆ ಪ್ರಮಾಣ ಪತ್ರ ಸಲ್ಲಿಸಿರುತ್ತೇನೆ. ಅದರಲ್ಲಿ ಬರೆದಿರುವ ಎಲ್ಲಾ ಅಂಶಗಳು ಸತ್ಯವಿರುತ್ತವೆ ಮತ್ತು ಅವುಗಳ ಅಂಶವನ್ನು ಓದಿ ನಾನೇ ಸಹಿ ಮಾಡಿರುತ್ತೇನೆ.

**ಮುಂದುವರಿದ ಮುಖ್ಯ ವಿಚಾರಣೆಃ ಅರ್ಜಿದಾರರ ಪರ ಶ್ರೀ ಎ.ಆರ್.ಎನ್. ವಕೀಲರಿಂದಃ-**

ಈ ಪ್ರಕರಣದಲ್ಲಿ ನಾನು ಅರ್ಜಿದಾರನಾಗಿದ್ದೇನೆ. ಈ ಪ್ರಕರಣಕ್ಕೆ ಸಂಬಂಧಿಸಿದಂತೆ, ದೃಢೀಕೃತ ಪ್ರ.ವ. ವರದಿ, ಪಿರ್ಯಾದಿ ನಕಲು, ಗಾಯದ ಪ್ರಮಾಣ ಪತ್ರ, ಪಂಚನಾಮೆ ವರದಿ ಪ್ರತಿ, ಐ.ಎಂ.ವಿ. ವರದಿಯ ಪ್ರತಿ, ನಕ್ಷೆ, ಚಾರ್ಜ್ ಶೀಟ್ ಪ್ರತಿ, ಇವುಗಳನ್ನು ಹಾಜರುಪಡಿಸಿದ್ದು, ಅವುಗಳನ್ನು ಕ್ರಮವಾಗಿ ನಿಪಿ-1 ರಿಂದ ನಿಪಿ-7 ಎಂದು ಗುರುತಿಸಲಾಯಿತು. ಎರಡು ಡಿಸ್ಚಾರ್ಜ್ ಸಮ್ಮರಿ ಮತ್ತು ಒಂದು ಟ್ರೀಟ್‌ಮೆಂಟ್ ಸಮ್ಮರಿಯನ್ನು ಹಾಜರುಪಡಿಸಿದ್ದು, ಅವುಗಳನ್ನು ನಿಪಿ-8 ರಿಂದ 10 ಎಂದು ಗುರುತಿಸಲಾಯಿತು. ಒಂದು ಅಂಗನ್ಯೂನ್ಯತೆ ಪ್ರಮಾಣ ಪತ್ರ ಹಾಜರುಪಡಿಸಿದ್ದು, ಸದರಿ ದಾಖಲೆಯನ್ನು ಗುರುತಿಸಲು ಎದ್ರುದಾರರ ಪರ ವಕೀಲರು ತಕರಾರು ಮಾಡಿದ್ದು, ಆದ್ದರಿಂದ ಅದನ್ನು  20 ವೈದ್ಯಕೀಯ ವೆಚ್ಚ ರಶೀದಿಯನ್ನು ಅವುಗಳನ್ನು ಕ್ರಮವಾಗಿ ನಿಪಿ-12 ರಿಂದ 31 ಎಂದು ಗುರುತಿಸಲಾಯಿತು.

(ನಿಪಿ-17 ನ್ನು ಗುರುತಿಸಲು ಎದುರುದಾರ ಪರ ವಕೀಲರು ತಕರಾರು ಮಾಡಿದ್ದರಿಂದ ಅದನ್ನು ಸಾಬೀತುಪಡಿಸುವ ತಕರಾರಿಗೆ ಒಳಪಟ್ಟು ಗುರುತಿಸಲಾಗಿದೆ.)

ಅಟೆಸ್ಟೆಡ್ ಮಾಡಿದ ಜೆರಾಕ್ಸ್ ಆಧಾರ ಪ್ರತಿಯನ್ನು ಹಾಜರುಪಡಿಸಲಾಗಿದ್ದು, ಸಾಕ್ಷಿ ಮೂಲ ದಾಖಲೆಯನ್ನು ಹಾಜರುಪಡಿಸಿದ್ದು, ಅದನ್ನು ಹೊಂದಿಸಿ ನೋಡಿ, ಸರಿಯಿದ್ದ ಕಾರಣ ನಿಪಿ-32 ಎಂದು ಗುರುತಿಸಲಾಯಿತು. ಮೂಲ ದಾಖಲೆಯನ್ನು ಸಾಕ್ಷಿಗೆ ಹಿಂದಿರುಗಿಸಲಾಯಿತು.

ಆದ್ದರಿಂದ ಅರ್ಜಿಯಲ್ಲಿ ಕೇಳಿಕೊಂಡಂತೆ ಪರಿಹಾರ ಕೊಡಿಸಬೇಕಾಗಿ ವಿನಂತಿ.

**ಪಾಟೀ ಸವಾಲುಃ 2ನೇ ಎದುರುದಾರರ ಪರ ಶ್ರೀ ಎಸ್.ಎಂ.ಬಿ. ವಕೀಲರಿಂದಃ–**

ನಾನು 8ನೇ ತರಗತಿಯವರೆಗೆ ಬೈಲೂರು ಗ್ರಾಮದಲ್ಲಿ ಓದಿರುತ್ತೇನೆ. ನನ್ನ ನಿಖರವಾದ ವಯಸ್ಸನ್ನು ತೋರಿಸಲು ಶಾಲಾ ದಾಖಾಲತಿಗಳನ್ನು ಹಾಜರುಪಡಿಸಲು ನನಗೆ ಯಾವುದೇ ತೊಂದರೆ ಇರುವುದಿಲ್ಲ. ನಿಪಿ–32 ರಲ್ಲಿ ಬರೆದ ನನ್ನ ಜನ್ಮ ದಿನಾಂಕವು ಅಂದಾಜಿನಲ್ಲಿ ಬರೆಯಲಾಗಿದೆ ಎಂದರೆ ಸರಿಯಲ್ಲ. ಅಪಘಾತದ ಸಮಯದಲ್ಲಿ ನನಗೆ 40 ವರ್ಷಕ್ಕಿಂತ ಹೆಚ್ಚಿನ ವಯಸ್ಸಾದ ಕಾರಣ, ನನ್ನ ಶಾಲಾ ದಾಖಲಾತಿಗಳನ್ನು ಹಾಜರುಪಡಿಸಲಾಗಿಲ್ಲ ಎಂದರೆ ಸರಿಯಲ್ಲ. ನಾನು ಶಿಲ್ಪಿ ಕೆಲಸವನ್ನು ಮಾಡಿ, ತಿಂಗಳಿಗೆ ರೂ.20,000/– ಎಂದು ತೋರಿಸಲು ಯಾವುದೇ ದಾಖಲೆ ಹಾಜರುಪಡಿಸಿಲ್ಲ ಎಂದರೆ ಸರಿಯಲ್ಲ. ಹೆಚ್ಚಿನ ಪರಿಹಾರ ಪಡೆಯುವ ಸಲುವಾಗಿ ಶಿಲ್ಪಿ ಕೆಲಸ ಮಾಡುತ್ತಿದ್ದೇನೆ ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಅರ್ಜಿಯಲ್ಲಿ ಹೇಳಿದಂತೆ, ಆಸ್ಪತ್ರೆಯ ತಿರುಗಾಟಕ್ಕಾಗಿ, ಊಟಕ್ಕಾಗಿ ಖರ್ಚು ಮಾಡಿಲ್ಲ ಎಂದರೆ ಸರಿಯಲ್ಲ. ಅಪಘಾತದಿಂದ ನನಗೆ ಯಾವುದೇ ತೀವ್ರ ಸ್ವರೂಪದ ಗಾಯವಾಗಿಲ್ಲ ಮತ್ತು ನನಗೆ ಯಾವುದೇ ಅಂಗನ್ಯೂನ್ಯತೆ ಆಗಿಲ್ಲ ಎಂದರೆ ಸರಿಯಲ್ಲ. ನಾನು ಆಸ್ಪತ್ರೆಯಲ್ಲಿ ಒಳರೋಗಿಯಾಗಿ ಚಿಕಿತ್ಸೆ ಪಡೆದಿಲ್ಲ ಮತ್ತು ಪುನಃ ಪುನಃ ಆಸ್ಪತ್ರೆಗೆ ಹೋಗಿ ಚಿಕಿತ್ಸೆ ಪಡೆದಿಲ್ಲ ಎಂದರೆ ಸರಿಯಲ್ಲ.

ನನ್ನ ಆದಾಯದಲ್ಲಿ ನಷ್ಟ ಉಂಟಾಗಿದೆ ಮತ್ತು ನನಗೆ ಮೊದಲಿಂತೆ ಕೆಲಸ ಮಾಡಲು ಆಗುತ್ತಿಲ್ಲ ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಮುಂದುವರಿದ ಚಿಕಿತ್ಸೆಗಾಗಿ ರೂ.40,000/– ಖರ್ಚು ಬರುತ್ತದೆ ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ವೈದ್ಯರ ಮೇಲೆ ಪ್ರಭಾವ ಬೀರಿ ನಿಪಿ–11 ನ್ನು ಪಡೆದು ಹಾಜರುಪಡಿಸಿದ್ದೇನೆ ಎಂದರೆ ಸರಿಯಲ್ಲ. ಅಪಘಾತವಾದಾಗ ಕಾರಿನಲ್ಲಿ ನಾವು ಇಬ್ಬರು ಪ್ರಯಾಣಿಸುತ್ತಿದ್ದೆವು. ಕಾರು ಪೌಲ್ ಎನ್ನುವವರಿಗೆ ಸೇರಿದ್ದಾಗಿತ್ತು. ಸದರಿ ಕಾರನ್ನು ನನ್ನ ಗೆಳೆಯ ನಿತೀಶ್ ಎನ್ನುವವರು ತೆಗೆದುಕೊಂಡು ಬಂದಿದ್ದರು. ನಾನು ಪ್ರಯಾಣಿಸುತ್ತಿದ್ದ ಕಾರಿನ ಚಾಲಕನಿಗೆ ಡಿ.ಎಲ್ ಇರಲಿಲ್ಲ ಎಂದರೆ ಸರಿಯಲ್ಲ. ಕಾರಿನ ಮಾಲೀಕರು ಅಪಘಾತವಾದಾಗ ಕಾರಿನಲ್ಲಿ ಪ್ರಯಾಣಿಸುವ ಪ್ರಯಾಣಿಕರಿಗೆ ವಿಮೆ ತುಂಬಿರಲಿಲ್ಲ ಎಂದರೆ ಸರಿಯಲ್ಲ. ಆದ್ದರಿಂದ 2ನೇ ಎದ್ರುದಾರ ನಾನು ಹೇಳಿದಂತೆ ಪರಿಹಾರ ಕೊಡಲು ಬಾಧ್ಯಸ್ಥನಾಗುವುದಿಲ್ಲ ಎಂದರೆ ಸರಿಯಲ್ಲ. ಕಾರಿನ ಚಾಲಕ ಮತ್ತು ಮಾಲೀಕರು ವಿಮಾ ಶರತ್ತನ್ನು ಉಲ್ಲಂಘನೆ

ಮಾಡಿದ್ದರಿಂದ 2ನೇ ಎದ್ರುದಾರ ನಾನು ಹೇಳಿದಂತೆ ಪರಿಹಾರ ಕೊಡಲು ಬಾಧ್ಯಸ್ಥನಾಗುವುದಿಲ್ಲ ಎಂದರೆ ಸರಿಯಲ್ಲ.

ಮರುವಿಚಾರಣೆ ಇಲ್ಲ.

**(ತೆ.ನ್ಯಾದಲ್ಲಿ ನನ್ನ ಉಕ್ತಲೇಖನದಂತೆ ಗಣಕೀಕೃತ ಮಾಡಿಸಲಾಯಿತು)**

**ಓ ಹೇ ಕೇ ಸರಿ ಇದೆ.**

*Sd/-*

**ಮೆಂಬರ್ ಎಡಿಶನಲ್ ಎಂ.ಎ.ಸಿ.ಟಿ. ಮತ್ತು**
**ಹಿರಿಯ ಸಿವಿಲ್ ನ್ಯಾಯಾಧೀಶರು, ಭಟ್ಕಳ.**